**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

**ಸಿ.ಸಿ.ನಂ:1090/2023**

ಸಿ.ಡಬ್ಲ್ಯೂ –2 ಪಿ.ಡಬ್ಲ್ಯೂ -2

| | | |
|---|---|---|
| ಹೆಸರು | ಃ | ನಾಗರಾಜ |
| ತಂದೆಃಗಂಡ | ಃ | ಸಿದ್ದಣ್ಣ |
| ವಯಸ್ಸು | ಃ | 33 ವರ್ಷ |
| ಉದ್ಯೋಗ | : | ಇಂಜಿನಿಯರ |
| ವಾಸಸ್ಥಳ | ಃ | ಪುಣೆ |

ದಿನಾಂಕಃ19.09.2023

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದಃ**

ಆರೋಪಿ ಪರಿಚಯ ಇರುತ್ತದೆ. ಚಾಸಾ-3 ರವರ ಪರಿಚಯ ಇರುತ್ತದೆ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಸಹಿ ಮಾಡು ಎಂದ ಕಾರಣ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ನಿಪಿ-1 ತೋರಿಸಿ ಸಹಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)**

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ದಿ:12.10.2022 ರಂದು ಸಂಜೆ 6.00 ರಿಂದ 7.00 ರ ನನ್ನ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿ. ನಾನು ಹಾಗೂ ಚಾಸಾ-3 ರವರು ಪಂಚನಾಮೆಗೆ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇವೆ ಎಂದರೆ ಸಾಕ್ಷಿ ನಾನವು ಕೇವಲ ಸಹಿ ಮಾಡಿರುತ್ತೇವೆ ತಿಳಿದುಕೊಂಡಿರುವುದಿಲ್ಲ ಎಂದು ಹೇಳುತ್ತಾರೆ. ನನ್ನ ಸಮಕ್ಷಮ ಮು.ಮಾ. ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆಗೆ ಸಹಿ ಮಾಡಿದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

**ಪಾಟೀ ಸವಾಲುಃ ಆರೋಪಿ ಪರ ಎಸ.ವಾಯ.ಯು. ವಕೀಲರಿಂದ**

ಪಂಚನಾಮೆಯಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ. ಪಂಚನಾಮೆಯಲ್ಲಿನ ಅಂಶಗಳು ಸುಳ್ಳು ಇರುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ.